ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ

(ಹದಿನಾರನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಗುರುವಾರ, ದಿನಾಂಕ 08ನೇ ಫೆಬ್ರವರಿ, 2018

(ಸಮಯ: ಬೆಳಿಗ್ಗೆ 10.30 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಮೂರನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಮೂರನೇ ಪಟ್ಟಿ

2. ವರದಿಯನ್ನೊಪ್ಪಿಸುವುದು

1) **ಶ್ರೀ ಎನ್. ಹೆಚ್. ಶಿವಶಂಕರರೆಡ್ಡಿ** (ಉಪ ಸಭಾಧ್ಯಕ್ಷರು ಹಾಗೂ ಅಧ್ಯಕ್ಷರು, ಖಾಸಗಿ ವಿಧೇಯಕಗಳ ಮತ್ತು ನಿರ್ಣಯಗಳ ಸಮಿತಿ) ಅವರು 2016-17ನೇ ಸಾಲಿನ ಖಾಸಗಿ ವಿಧೇಯಕಗಳ ಮತ್ತು ನಿರ್ಣಯಗಳ ಸಮಿತಿಯ ಹದಿನೆಂಟನೇ ವರದಿಯನ್ನೊಪ್ಪಿಸುವುದು.

3. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲೆ ಮುಂದುವರೆದ ಚರ್ಚೆ.

4. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಎನ್.ಹೆಚ್. ಕೋನರೆಡ್ಡಿ, ಕೆ. ಗೋಪಾಲಯ್ಯ ಮತ್ತು ಮಧು ಬಂಗಾರಪ್ಪ ಇವರುಗಳು** – ಕಳಸಾ ಬಂಡೂರಿ ಮಹದಾಯಿ ಯೋಜನೆಯ ಜಾರಿಗಾಗಿ ರೈತರು ಹೋರಾಟ ನಡೆಸುತ್ತಿದ್ದು ಯೋಜನೆ ಅನುಷ್ಠಾನಗೊಳಿಸಲು ಮೂರು ರಾಜ್ಯಗಳ ಮುಖ್ಯಮಂತ್ರಿಗಳ ಜೊತೆ ಚರ್ಚಿಸುವ ಕುರಿತು ನೀಡಿರುವ ಸೂಚನೆಯ ಮೇಲೆ ಚರ್ಚೆ.

2) **ಶ್ರೀಯುತರುಗಳಾದ ಜಗದೀಶ್ ಶೆಟ್ಟರ, ಗೋವಿಂದ ಎಂ. ಕಾರಜೋಳ, ಎಸ್. ಸುರೇಶ್ ಕುಮಾರ್, ವಿಶ್ವೇಶ್ವರ ಹೆಗಡೆ ಕಾಗೇರಿ, ಆರ್. ಅಶೋಕ್ ಹಾಗೂ ಇತರರು** – ರಾಜ್ಯದ ಗಡಿ ಭಾಗದಲ್ಲಿರುವ 52 ತಾಲ್ಲೂಕುಗಳ ಅಭಿವೃದ್ಧಿಗೆ ಸರ್ಕಾರ ಮಂಜೂರು ಮಾಡಿರುವ 50.00 ಕೋಟಿ ರೂ ಅನುದಾನವನ್ನು ನೀಡುವಲ್ಲಿ ಅಕ್ರಮವೆಸಗಿರುವ ಹಾಗೂ ಅಕ್ರಮಗಳಲ್ಲಿ ಭಾಗಿಯಾಗಿರುವವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಿ ಅವರ ವಿರುದ್ಧ ಕ್ರಮಕೈಗೊಳ್ಳಬೇಕೆಂದು ನೀಡಿರುವ ಸೂಚನೆಯ ಮೇಲೆ ಚರ್ಚೆ.

5. ಗಮನ ಸೆಳೆಯುವ ಸೂಚನೆಗಳು

1) **ಶ್ರೀಯುತರುಗಳಾದ ಹೆಚ್.ಎಸ್. ಪ್ರಕಾಶ್, ಹೆಚ್.ಡಿ. ರೇವಣ್ಣ ಮತ್ತು ಕೆ.ಎಂ. ಶಿವಲಿಂಗೇಗೌಡ ಇವರುಗಳು** – ಹಾಸನ ನಗರದ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಮೂರನೇ ಹಂತದ ಕಾಮಗಾರಿಗೆ ಅನುದಾನ ಬಿಡುಗಡೆ, ಹೆಚ್ಚುವರಿ ಹುದ್ದೆಗಳ ಮಂಜೂರಾತಿ ಮತ್ತು ಅಗತ್ಯ ಉಪಕರಣಗಳನ್ನು ಒದಗಿಸುವ ಬಗ್ಗೆ ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

2) **ಶ್ರೀಯುತರುಗಳಾದ ಹೆಚ್.ಡಿ. ರೇವಣ್ಣ ಮತ್ತು ಕೆ.ಎಂ. ಶಿವಲಿಂಗೇಗೌಡ ಇವರುಗಳು** – ಹಾಸನ ಜಿಲ್ಲೆ, ಚನ್ನರಾಯಪಟ್ಟಣ ತಾಲ್ಲೂಕು ವ್ಯಾಪ್ತಿಯ ದಂಡಿಗನ ಹೋಬಳಿ ಆನೇಕೆರೆ ಹಾಗೂ ಇತರೆ 65 ಗ್ರಾಮಗಳಿಗೆ "ಬಹು ಗ್ರಾಮ ಯೋಜನೆಯಡಿಯಲ್ಲಿ" ಶಾಶ್ವತ ಕುಡಿಯುವ ನೀರಿನ ಯೋಜನೆಯ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ವಿಷಯದ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

3) **ಶ್ರೀಯುತರುಗಳಾದ ಸಿ.ಎನ್. ಬಾಲಕೃಷ್ಣ ಮತ್ತು ಕೆ.ಎಂ. ಶಿವಲಿಂಗೇಗೌಡ ಇವರುಗಳು** – ಹಾಸನ ಜಿಲ್ಲೆ, ಹೊಳೆನರಸೀಪುರ ತಾಲ್ಲೂಕಿನ ಹಿರೀಸಾವೆ – ಶನಿವಾರಸಂತೆ ರಾಜ್ಯ ಹೆದ್ದಾರಿ 8ರಲ್ಲಿ ಆಶ್ರಯ ನಿವೇಶನಕ್ಕೆ ಕಾಯ್ದಿರಿಸಿರುವ ಜಾಗವನ್ನು ಅಕ್ರಮ ಒತ್ತುವರಿ ಮಾಡಿಕೊಂಡು ವಾಣಿಜ್ಯ ಕಟ್ಟಡಗಳನ್ನು ಅಕ್ರಮವಾಗಿ ನಿರ್ಮಿಸಿಕೊಂಡಿರುವವರ ವಿರುದ್ಧ ಕಾನೂನು ರೀತ್ಯಾ ಕ್ರಮ ಜರುಗಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

4) **ಶ್ರೀ ಸಾ.ರಾ. ಮಹೇಶ್ ಇವರು** – ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ ಅನುದಾನ ಕೊರತೆಯಿದ್ದು ಸಂಸ್ಥೆಯು ಆರ್ಥಿಕ ಸಂಕಷ್ಟದಲ್ಲಿದ್ದರೂ ಕೆಂಪೇಗೌಡ ಬಡಾವಣೆಯ ಕಾಮಗಾರಿಗಳನ್ನು ಎಸ್.ಆರ್. ದರಕ್ಕಿಂತ ಹೆಚ್ಚಿಗೆ ದರದಲ್ಲಿ ಗುತ್ತಿಗೆ ನೀಡಿರುವ ಬಗ್ಗೆ ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರ ಗಮನ ಸೆಳೆಯುವುದು.

5) **ಶ್ರೀ ಬಿ.ವೈ. ರಾಘವೇಂದ್ರ ಇವರು** – ಶಿಕಾರಿಪುರ ತಾಲ್ಲೂಕು ಸೇರಿದಂತೆ ರಾಜ್ಯದಲ್ಲಿ ರೈತರು ಹೆಚ್ಚಿನ ಪ್ರದೇಶದಲ್ಲಿ ಮೆಕ್ಕೆಜೋಳ ಬೆಳೆಯನ್ನು ಬೆಳೆದಿದ್ದು, ಬೆಳೆಗೆ ಸೂಕ್ತವಾದ ಬೆಂಬಲ ಬೆಲೆ ಹಾಗೂ ಪ್ರೋತ್ಸಾಹ ಧನ ದೊರಕದೇ ರೈತರು ಅನೇಕ ಸಮಸ್ಯೆಗಳನ್ನು ಎದುರಿಸುತ್ತಿರುವ ಬಗ್ಗೆ ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

6) **ಶ್ರೀ ಎಸ್.ಆರ್. ವಿಶ್ವನಾಥ್ ಇವರು** – ಬೆಂಗಳೂರು ನಗರ ವ್ಯಾಪ್ತಿಯಿಂದ 18 ಕಿ.ಮೀ. ಹೊರಗೆ ಸಾಗುವಳಿ ಮಾಡುತ್ತಿದ್ದ ರೈತರಿಗೆ ನಮೂನೆ 50 ಮತ್ತು 53ರಡಿ ಅಕ್ರಮ – ಸಕ್ರಮ ಯೋಜನೆಯಡಿ ಜಮೀನುಗಳನ್ನು ಮಂಜೂರು ಮಾಡಿ ಖಾತೆ ಮಾಡಿಕೊಟ್ಟಿದ್ದರೂ ಇದುವರೆವಿಗೂ ಜಮೀನಿಗೆ ಪೋಡಿ ಮಾಡಿಕೊಡದೇ ಇರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

7) **ಶ್ರೀ ಹೆಚ್.ಎಸ್. ಶಿವಶಂಕರ್ ಇವರು** – ದಾವಣಗೆರೆ ಜಿಲ್ಲೆ, ಹರಿಹರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಬೈರನಪಾದ ಏತ ನೀರಾವರಿ ಯೋಜನೆಯನ್ನು ಅನುಷ್ಠಾನಗೊಳಿಸುವ ವಿಷಯದ ಬಗ್ಗೆ ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

8) **ಶ್ರೀ ಎನ್.ಹೆಚ್. ಕೋನರೆಡ್ಡಿ ಇವರು** – ಧಾರವಾಡ ಜಿಲ್ಲೆಯ ನವಲಗುಂದ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಗೆ ಬರುವ ಅಣ್ಣಿಗೇರಿಯನ್ನು ನೂತನ ತಾಲ್ಲೂಕನ್ನಾಗಿ ಘೋಷಣೆ ಮಾಡಿದ್ದರೂ ಇದುವರೆವಿಗೂ ತಾಲ್ಲೂಕು ಕಛೇರಿಯನ್ನು ತೆರೆಯಲು ಹಾಗೂ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಕ್ರಮಕೈಗೊಳ್ಳದೇ ಇರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

–4–

9) **ಶ್ರೀ ಗೋವಿಂದ ಎಂ. ಕಾರಜೋಳ ಇವರು** – ಬಾಗಲಕೋಟೆ ಜಿಲ್ಲೆಯ ಮುಧೋಳ ತಾಲ್ಲೂಕಿನ ಶಿರೋಳ ಗ್ರಾಮದಲ್ಲಿ ವಾಸಿಸುತ್ತಿರುವ ನೇಕಾರರು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದಲ್ಲಿ ಪಡೆದಿರುವ ಸಾಲವನ್ನು ಮನ್ನಾ ಮಾಡುವ ಬಗ್ಗೆ ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

10) **ಶ್ರೀ ಹೆಚ್.ಎಸ್. ಶಿವಶಂಕರ್ ಇವರು** – ದಾವಣಗೆರೆ ಜಿಲ್ಲೆ ಹರಿಹರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಕೊಂಡಜ್ಜಿ ಗ್ರಾಮದಲ್ಲಿ ಪೋಲಿಸ್ ಪಬ್ಲಿಕ್ ಸ್ಕೂಲ್ ಮಂಜೂರಾಗಿದ್ದರೂ ಇದುವರೆವಿಗೂ ಶಾಲೆಯ ಕಟ್ಟಡವನ್ನು ನಿರ್ಮಾಣ ಮಾಡದೇ ಇರುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

6. ಖಾಸಗಿ ಸದಸ್ಯರ ಕಾರ್ಯಕಲಾಪಗಳು

ನಿರ್ಣಯ

1) **ಶ್ರೀ ಕೆ. ಗೋಪಾಲಯ್ಯ ಅವರು ಕೆಳಕಂಡ ನಿರ್ಣಯವನ್ನು ಮಂಡಿಸುವುದು:**

"ವಿಶ್ವ ಮಾನವ ಸಂದೇಶವನ್ನು ನೀಡಿದ ರಾಷ್ಟ್ರಕವಿ ಹಾಗೂ ಜ್ಞಾನಪೀಠ ಪ್ರಶಸ್ತಿ ಪುರಸ್ಕೃತರಾದ ದಿ: ಡಾ|| ಕೆ.ವಿ. ಪುಟ್ಟಪ್ಪನವರಿಗೆ ಮರಣೋತ್ತರ ಭಾರತ ರತ್ನ ಪ್ರಶಸ್ತಿಯನ್ನು ನೀಡಬೇಕೆಂದು ಈ ಸದನವು ಕೇಂದ್ರ ಸರ್ಕಾರವನ್ನು ಒತ್ತಾಯಿಸುತ್ತದೆ."

ಎಸ್. ಮೂರ್ತಿ
ಕಾರ್ಯದರ್ಶಿ(I/c)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ಅಂತರ್ಜಾಲದ ಈ ವಿಳಾಸದಲ್ಲಿ ಪಡೆದುಕೊಳ್ಳಬಹುದು
http://kla.kar.nic.in/assembly/lob/lob.htm